# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "ನಿರ್ಮಲ ಮೀನು ಮಾರಾಟ ವ್ಯವಸ್ಥೆಯ ವಿಸ್ತರಣೆ ಮತ್ತು ಆಧುನೀಕರಣ" ಯೋಜನೆಯನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:- (1) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ರಾಜ್ಯ ಮಟ್ಟದ ಯೋಜನಾ ಅನುಮೋದನಾ ಸಮಿತಿಯ ದಿನಾಂಕ: 16-06-2016 ರ ಸಭೆಯ ನಡವಳಿ.

(2) ಕೃಷಿ ಇಲಾಖೆ ಆದೇಶ ಸಂಖ್ಯೆ: ಎಜಿಡಿ/120/ ಎಎಂಎಸ್/2016 (ಭಾಗ-1), ದಿನಾಂಕ: 19-11-2016.

(3) ಪತ್ರ ಸಂಖ್ಯೆ: ಮೀನಿ/11/ಆರ್‌ಕೆವಿವೈ/2015, ದಿನಾಂಕ: 12-12-2016.

******

RKVY 27/1/17

C-9705

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 16-06-2016 ರಂದು ನಡೆದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ರಾಜ್ಯ ಮಟ್ಟದ ಯೋಜನಾ ಅನುಮೋದನಾ ಸಮಿತಿ ಸಭೆಯಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "ನಿರ್ಮಲ ಮೀನು ಮಾರಾಟ ವ್ಯವಸ್ಥೆಯ ವಿಸ್ತರಣೆ ಮತ್ತು ಆಧುನೀಕರಣ" ಎಂಬ ಯೋಜನೆಗೆ ಅನುಮೋದನೆ ನೀಡಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ, ಮೀನುಗಾರಿಕೆ ಇಲಾಖೆಗೆ ಅನುದಾನದ ಕೊರತೆಯಿಂದಾಗಿ ರೂ.282.00 ಲಕ್ಷಗಳನ್ನು ನಿಗಧಿಪಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ಸದರಿ ಕಾರ್ಯಕ್ರಮವು ಮುಂದುವರೆದ ಯೋಜನೆಯಾಗಿದ್ದು, ವೈಜ್ಞಾನಿಕ ರೀತಿಯಲ್ಲಿ ಶುಚಿಯಾದ ತಾಜಾ / ಸಂಸ್ಕರಿತ ಮೀನು ಮಾರಾಟ ವ್ಯವಸ್ಥೆಯನ್ನು ಮಾದರಿಯಾಗಿ ಸರ್ಕಾರಿ ಸಂಸ್ಥೆಗಳು ಸ್ಥಾಪಿಸಿದಲ್ಲಿ, ಖಾಸಗಿ ರಂಗದಲ್ಲಿಯೂ ಸ್ಪರ್ಧಾತ್ಮಕವಾಗಿ ವೈಜ್ಞಾನಿಕ ನಿರ್ವಹಣೆ ಅನಿವಾರ್ಯವಾಗುತ್ತದೆ. ಇದರಿಂದ ಮೀನು ಹಿಡುವಳೀ ನಂತರದ ನಷ್ಟವು ಕಡಿಮೆಯಾಗುವುದಲ್ಲದೆ, ಮೀನುಗಾರರಿಗೆ ಮತ್ತು ಗ್ರಾಹಕರಿಗೆ ಲಾಭದಾಯವಾಗುತ್ತದೆ. ಈ ಯೋಜನೆಯಡಿ ಕೆಳಕಂಡ 3 ಘಟಕಗಳನ್ನು ಹೊಂದಿರುವುದಾಗಿ ತಿಳಿಸಿರುತ್ತಾರೆ.

(1) ವಿವಿದೋದ್ದೇಶ ಮೀನು ಆಹಾರ ಕೇಂದ್ರಗಳ ಸ್ಥಾಪನೆ

(2) ಬೆಂಗಳೂರಿನ ಕಬ್ಬನ್‌ಪಾರ್ಕ್‌ನಲ್ಲಿರುವ ಮತ್ಸ್ಯದರ್ಶಿನಿಯ ಆಧುನೀಕರಣ

(3) ಸಂಚಾರಿ ಮೀನು ಉಪಹಾರ ಗೃಹ / ಮಾರಾಟ ಘಟಕ ಸ್ಥಾಪನೆ.

ಸದರಿ ಕಾರ್ಯಕ್ರಮವನ್ನು ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/94/ ಮೀಇಯೋ/2015, ದಿನಾಂಕ: 08-02-2016 ರ ಆದೇಶದಲ್ಲಿನ ಷರತ್ತು ಮತ್ತು ನಿಬಂಧನೆಗಳ ಪ್ರಕಾರ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 94 ಮೀಇಯೋ 2015, ಬೆಂಗಳೂರು ದಿನಾಂಕ: 25-01-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2016-17ನೇ ಸಾಲಿನಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "ನಿರ್ಮಲ ಮೀನು ಮಾರಾಟ ವ್ಯವಸ್ಥೆಯ ವಿಸ್ತರಣೆ ಮತ್ತು ಆಧುನೀಕರಣ" ಎಂಬ ಯೋಜನೆಯಡಿ ಕೆಳಕಂಡ ಘಟಕಗಳನ್ನು ರೂ.20.00 ಲಕ್ಷ (ಇಪ್ಪತ್ತು ಲಕ್ಷ ರೂಪಾಯಿಗಳು ಮಾತ್ರ)ಗಳ ವೆಚ್ಚದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/94/ಮೀಇಯೋ/2015, ದಿನಾಂಕ: 08-02-2016 ರಲ್ಲಿ ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳ ಪ್ರಕಾರ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

(1) ವಿವಿದೋದ್ದೇಶ ಮೀನು ಆಹಾರ ಕೇಂದ್ರಗಳ ಸ್ಥಾಪನೆ.
(2) ಬೆಂಗಳೂರಿನ ಕಬ್ಬನ್‌ಪಾರ್ಕ್‌ನಲ್ಲಿರುವ ಮತ್ಸ್ಯದರ್ಶಿನಿಯ ಆಧುನೀಕರಣ
(3) ಸಂಚಾರಿ ಮೀನು ಉಪಹಾರ ಗೃಹ / ಮಾರಾಟ ಘಟಕ ಸ್ಥಾಪನೆ.

ಈ ಯೋಜನೆಯಡಿ ಉಂಟಾಗುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2401-ಸಸ್ಯ ಸಂಗೋಪನೆ-00-800-ಇತರೆ ವೆಚ್ಚ-1-57-ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (ಆರ್‌ಕೆವಿವೈ)-059-ಇತರೆ ಖರ್ಚುಗಳು-106-ಸಹಾಯಧನ (ಯೋಜನೆ) ರಡಿ ಒದಗಿಸಿದ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ: 16-06-2016 ರಂದು ನಡೆದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯ ನಿರ್ಣಯದಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

25/1/17

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

25/01/17

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು
4) ಎಲ್ಲಾ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ- ಮೀನುಗಾರಿಕೆ ನಿರ್ದೇಶಕರ ಮುಖಾಂತರ.
5) ಆಂತರಿಕ ಆರ್ಥಿಕ ಸಲಹೆಗಾರರು, ಪಸಂಮೀ ಇಲಾಖೆ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
7) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಂ / ಹೆಚ್ಚಿನ ಪ್ರತಿಗಳು.